ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s Gamesa Renewable Private Limited ಕಂಪನಿಗೆ ಕಲಬುರಗಿ ಜಿಲ್ಲೆಯ, ಚಿತ್ತಾಪುರ ತಾಲ್ಲೂಕಿನ ಯಾದಗೀರ್ ಆರ್‌ಎಫ್, ಹಿರೇಆಲೂರು, ಹೆಗ್ಗಾಪುರ ತಾಂಡ್, ಬೆಳಗೇರಾ ಮತ್ತು ದಂಡಗುಂದ್ ಗ್ರಾಮಗಳಲ್ಲಿ 60 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಹಂಚಿಕೆ ಆದೇಶ ನೀಡುವ ಬಗ್ಗೆ.

**ಓದಲಾಗಿದೆ:**
1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: KREDL/08/GRPL-60MW/ Sankanur / 2016/1380-G
2. ದಿನಾಂಕ: 18.07.2016 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.
3. ಸರ್ಕಾರದ ಪತ್ರ ಸಂಖ್ಯೆ: ಇಎನ್ 192 ಎನ್‌ಸಿಇ 2016, ದಿನಾಂಕ: 16.02.2017
4. ಸರ್ಕಾರದ ಪತ್ರ ಸಂಖ್ಯೆ: ಇಎನ್ 192 ಎನ್‌ಸಿಇ 2016, ದಿನಾಂಕ: 18.02.2017
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ: KREDL/08/GRPL-60MW /2017/1586, ದಿನಾಂಕ : 02.03.2017.

ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಸಂ. 1047 ದಿನಾಂಕ 21/3/17 ಬೆಂಗಳೂರು

* * *

<u>ಪ್ರಸ್ತಾವನೆ :-</u>

M/s Gamesa Renewable Private Limited ಕಂಪನಿಯವರು ಕಲಬುರಗಿ ಜಿಲ್ಲೆಯ, ಚಿತ್ತಾಪುರ ತಾಲ್ಲೂಕಿನ ಯಾದಗೀರ್ ಆರ್‌ಎಫ್, ಹಿರೇಆಲೂರು, ಹೆಗ್ಗಾಪುರ ತಾಂಡ್, ಬೆಳಗೇರಾ ಮತ್ತು ದಂಡಗುಂದ್ ಗ್ರಾಮಗಳಲ್ಲಿ 60 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆ ಹಂಚಿಕೆ ಕೋರಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಇದನ್ನು ಹಂಚಿಕೆ ಸಮಿತಿ ಸಭೆಯ ಮುಂದೆ ಮಂಡಿಸುವ ಸಲುವಾಗಿ ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಹಾಗೂ ಇನ್ನಿತರೆ ವಿವರಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಮೇಲೆ ಓದಲಾದ ಕ್ರಮ ಸಂಖ್ಯೆ (1) ರನ್ವಯ ಏಕ ಕಡತ ಪದ್ಧತಿಯಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಈ ಪ್ರಸ್ತಾವನೆಯನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (2) ರನ್ವಯ ದಿನಾಂಕ :18.07.2016 ರಂದು ನಡೆದ ಹಂಚಿಕೆ ಸಮಿತಿ ಸಭೆಯ ಮುಂದೆ ಮಂಡಿಸಲಾಗಿತ್ತು. ಸಮಿತಿಯ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, M/s Gamesa Renewable Private Limited ಕಂಪನಿಯವರು ಕಲಬುರಗಿ ಜಿಲ್ಲೆಯ, ಚಿತ್ತಾಪುರ ತಾಲ್ಲೂಕಿನ ಯಾದಗೀರ್ ಆರ್‌ಎಫ್, ಹಿರೇಆಲೂರು, ಹೆಗ್ಗಾಪುರ ತಾಂಡ್, ಬೆಳಗೇರಾ ಮತ್ತು ದಂಡಗುಂದ್ ಗ್ರಾಮಗಳಲ್ಲಿ 60 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಎರಡು ವರ್ಷಗಳಲ್ಲಿ ವಾಸ್ತವಿಕ ಸಾಮರ್ಥ್ಯಕ್ಕೆ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಕೆ.ಆರ್.ಇ.ಡಿ.ಎಲ್.ಗೆ ಸಲ್ಲಿಸುವ ಷರತ್ತಿಗೊಳಪಟ್ಟು ತತ್ವಶಃ ಅನುಮೋದನೆ ನೀಡಲು ಸಮಿತಿಯು ಸರ್ವಾನುಮತದಿಂದ ಶಿಫಾರಸ್ಸು ಮಾಡಿರುತ್ತದೆ.

MD KREDL 22/3/17

1647
22/13/2017

GM (Tech) I/C KREDL

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಸರ್ಕಾರದ ಪತ್ರದನ್ವಯ M/s Gamesa Renewable Private Limited ಕಂಪನಿಯವರು ಕಲಬುರಗಿ ಜಿಲ್ಲೆಯ, ಚಿತ್ತಾಪುರ ತಾಲ್ಲೂಕಿನ ಯಾದಗೀರ್ ಆರ್‌ಎಫ್, ಹಿರೇಅಲೂರು, ಹೆಗ್ಗಾಪುರ ತಾಂಡ್, ಬೆಳಗೇರಾ ಮತ್ತು ದಂಡಗುಂದ್ ಗ್ರಾಮಗಳಲ್ಲಿ 60 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸುವ ಬಗ್ಗೆ ವಾಸ್ತವಿಕ ಸಾಮರ್ಥ್ಯಕ್ಕೆ ವಿಸ್ತೃತ ಯೋಜನಾ ವರದಿ (DPR) ಯನ್ನು ಎರಡು ವರ್ಷದೊಳಗಾಗಿ ತಯಾರಿಸಿ, ನಿಯಮಾನುಸಾರ ಪಾವತಿಸಬೇಕಾದ ಶುಲ್ಕದೊಂದಿಗೆ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸತಕ್ಕದೆಂಬ ಷರತ್ತಿಗೊಳಪಟ್ಟು ಸದರಿ ಯೋಜನೆಗೆ ಸರ್ಕಾರದ ತಾತ್ವಿಕ ಅನುಮತಿಯನ್ನು ನೀಡಲಾಗಿತ್ತು.

ಈ ಮಧ್ಯೆ, ಅಭಿವೃದ್ಧಿದಾರರು ದಿನಾಂಕ : 13.02.2017 ರ ಪತ್ರದಲ್ಲಿ ಸರ್ಕಾರಕ್ಕೆ ಮನವಿ ಸಲ್ಲಿಸಿ ಹಂಚಿಕೆ ಪ್ರಸ್ತಾವನೆಯೊಂದಿಗೆ ತಾವು ಸಲ್ಲಿಸಿರುವ ಡಿಎಫ್‌ಆರ್ ಅನ್ನು ಡಿಪಿಆರ್ ಎಂದು ಪರಿಗಣಿಸಿ, ಸರ್ಕಾರಿ ಆದೇಶವನ್ನು ಹೊರಡಿಸುವಂತೆ ಕೋರಿರುತ್ತಾರೆ. ಅಭಿವೃದ್ಧಿದಾರರು ಸಲ್ಲಿಸಿರುವ ಮನವಿಯನ್ನು ನಿಯಮಾನುಸಾರ ಪರಿಶೀಲಿಸಿ ತಮ್ಮ ಸ್ಪಷ್ಟ ಅಭಿಪ್ರಾಯದೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (4) ಸರ್ಕಾರದ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರನ್ನು ಕೋರಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರು M/s Gamesa Renewable Private Limited ಕಂಪನಿಗೆ ಕಲಬುರಗಿ ಜಿಲ್ಲೆಯ, ಚಿತ್ತಾಪುರ ತಾಲ್ಲೂಕಿನ ಯಾದಗೀರ್ ಆರ್‌ಎಫ್, ಹಿರೇಅಲೂರು, ಹೆಗ್ಗಾಪುರ ತಾಂಡ್, ಬೆಳಗೇರಾ ಮತ್ತು ದಂಡಗುಂದ್ ಗ್ರಾಮಗಳಲ್ಲಿ 60 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಸರ್ಕಾರದ ಹಂಚಿಕೆ ಆದೇಶ ನೀಡಿದ್ದಲ್ಲಿ, ಸದರಿ ಕಂಪನಿಯವರು ಕ್ರೆಡಲ್ ಜೊತೆ ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಡಿಪಿಆರ್ ಶುಲ್ಕ ಪಾವತಿಸಬೇಕಾಗಿರುತ್ತದೆ ಎಂಬ ಅಭಿಪ್ರಾಯದೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 192 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ : 18.03.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಸರ್ಕಾರವು, M/s Gamesa Renewable Private Limited ಕಂಪನಿಗೆ ಕಲಬುರಗಿ ಜಿಲ್ಲೆಯ, ಚಿತ್ತಾಪುರ ತಾಲ್ಲೂಕಿನ ಯಾದಗೀರ್ ಆರ್‌ಎಫ್, ಹಿರೇಅಲೂರು, ಹೆಗ್ಗಾಪುರ ತಾಂಡ್, ಬೆಳಗೇರಾ ಮತ್ತು ದಂಡಗುಂದ್ ಗ್ರಾಮಗಳಲ್ಲಿ 60 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ನಿಯಮಾನುಸಾರ ನಿಗಧಿತ ಶುಲ್ಕವನ್ನು ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಸಂಸ್ಥೆಗೆ ಪಾವತಿಸುವ ಷರತ್ತಿಗೊಳಪಟ್ಟು ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು **ಹಂಚಿಕೆ** ಮಾಡಿ ಆದೇಶಿಸಲಾಗಿದೆ.

--3

Geographical area description for 60 MW capacity wind power project

| Sl.No. | Toposheet No. | Proposed capacity in MW | Near by villages of the proposed area and district. | Geographical area description of the project |
|---|---|---|---|---|
| 1 | 56 H/1 | 60 MW<br><br>(30 Nos x 2000 kW) | Yadgir RF, Hire Alur, Yagapur Tanda, Belagera & Dandagund, Chitapur Taluk, Kalaburgi district. | The identified area is covered in Forest. The area is surrounded by points A, B, C, D & E and are held in the following Geographical co-ordinates as:<br><br>**Point A**:Lat:16°55′0″N Long: 77°2′47.76″E<br>**Point B**:Lat:16°58′52.32″N Long: 77°2′40.92″E<br>**Point** C:Lat:16°58′55.56″N, Long: 77°7′33.24″E<br>**Point D**:Lat:16°56′52.8″N Long:77°10′45.84″E<br>**Point E**:Lat:16°55′0‴N Long:77°10′46.2″E<br>Peaks: 468, 458, 488, 577, 523, 579, 567, 455, 450 & 536 m AMSL. |

**ಷರತ್ತುಗಳು:-**

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರಿ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011 ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
4. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಕೈಗೊಳ್ಳುತ್ತಿರುವುದರಿಂದ, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.
6. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಯೋಜನಾ ಅನುಷ್ಠಾನ ಪ್ರದೇಶದಲ್ಲಿನ ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಯೊಂದಿಗೆಯೇ ವಿದ್ಯುತ್ ಖರೀದಿ ಒಡಂಬಡಿಕೆಯನ್ನು ಮಾಡಿಕೊಳ್ಳಲು/ ಕೆ.ಪಿ.ಟಿ.ಸಿ.ಎಲ್.ನೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು / ಮೂರನೇ ವ್ಯಕ್ತಿಗೆ ಮಾರಾಟ ಮಾಡಲು / ಸ್ವಂತ ಬಳಕೆ ಮಾಡಿಕೊಳ್ಳಲು ಕೂಡ ಅನುಮತಿಸಲಾಗಿದೆ.
7. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.

---4)